**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಕೊಳ್ಳೇಗಾಲ (ಪೀಠಾಸೀನ ಹನೂರು)**

**ಸಿ.ಸಿ. 1590/2022**

| **ಪಿರ್ಯಾದುದಾರರು** | **ವಿರುದ್ಧ** | **ಆರೋಪಿಃ** |
|---|---|---|
| ಹನೂರು ಪೊಲೀಸ್ ಠಾಣೆ | | ರವಿ |

**::ಆಪಾದನೆ::**

**ಶ್ರೀಮತಿ ಕಾವ್ಯಶ್ರೀ.ಎಂ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳು, ಕೊಳ್ಳೇಗಾಲ, ಆದ ನಾನು ನಿಮ್ಮ ಮೇಲೆ ಅಂದರೆಃ**

ರವಿ ಬಿನ್ ಮಾದೇವ, 20 ವರ್ಷ,
ವಾಸಃ ಅರೆಕಡುವಿನದೊಡ್ಡಿ ಗ್ರಾಮ, ಹನೂರು ತಾಲ್ಲೋಕು,
ಚಾಮರಾಜನಗರ ಜಿಲ್ಲೆ.

**ನಿಮ್ಮ ಮೇಲೆ ಇರುವ ಆಪಾದನೆ ಇಂತಿದೆಃ**

ದಿಃ 07.04.2021 ರಂದು ಮಧ್ಯಾಹ್ನ 02.00 ಗಂಟೆಯ ಸಮಯದಲ್ಲಿ ಹನೂರು ಪೊಲೀಸ್ ಠಾಣಾ ಸರಹದ್ದು, ಅರೆಕಡುವಿನದೊಡ್ಡಿ ಗ್ರಾಮದ ಕೋಡಿ ಮಹದೇಶ್ವರ ದೇವಸ್ಥಾನದ ಮುಂಭಾಗ ಹಾದು ಹೋಗಿರುವ ರಸ್ತೆಯಲ್ಲಿ ಸಂಜೆ 07.45 ಗಂಟೆ ಸಮಯದಲ್ಲಿ ರಾಮಾಪುರ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹೂಗ್ಯಂ ಗ್ರಾಮದಲ್ಲಿ ಆರೋಪಿಯಾದ ನೀನು ಟಿಎನ್–36–ಎಸಿ–4289 ಸ್ಪೆಂಡರ್ ಬೈಕಿನಲ್ಲಿ ಶ್ರೀಮತಿ ಮೃತ ಮಂಜುಳರವನ್ನು ಬೈಕಿನ ಹಿಂಬದಿಯಲ್ಲಿ ಕೂರಿಸಿಕೊಂಡು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 279ರ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಟಿಎನ್–36–ಎಸಿ–4289 ಸ್ಪೆಂಡರ್ ಬೈಕಿನಲ್ಲಿ ಶ್ರೀಮತಿ ಮಂಜುಳರವನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಹಿಂಬದಿಯಲ್ಲಿ ಕುಳಿತಿದ್ದ ಮಂಜುಳ ಕೆಳಗೆ ಬಿದ್ದು ತಲೆಗೆ ಏಟು ಬಿದ್ದು ಮೈಸೂರು ಜೆ.ಎಸ್.ಎಸ್. ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಫಲಕಾರಿಯಾಗದೆ ಮೃತ ಪಟ್ಟಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 304(ಎ) ರ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಕೊನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ವಾಹನ ಚಾಲನಾ ಪರವಾನಗಿ ಇಲ್ಲದೇ ಇದ್ದರೂ ಟಿಎನ್-36-ಎಸಿ-4289 ಸ್ಪೆಂಡರ್ ಬೈಕಿನಲ್ಲಿ ಶ್ರೀಮತಿ ಮಂಜುಳರವನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ್ದು, ಆ ಮೂಲಕ ಮೋಟಾರು ವಾಹನ ಕಾಯ್ದೆ ಕಲಂ 181ರ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಮೇಲಿನ ಆಪಾದನೆಗಳಿಗೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗುವಂತೆ ನಿಮಗೆ ನಿರ್ದೇಶಿಸಲಾಗಿದೆ.

ಪ್ರ-1: ಮೇಲಿನ ಆಪಾದನೆಯನ್ನು ಓದಿ, ತಿಳಿಸಿ ಹೇಳಿದ್ದು, ನಿಮಗೆ ಅರ್ಥವಾಗಿದೆಯೆ?

ಉತ್ತರಃ

ಪ್ರ-2: ನೀವು ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆಂದು ಇಚ್ಚಿಸುತ್ತೀರೋ?

ಉತ್ತರಃ

(ಮೇಲಿನ ಆಪಾದನೆಯನ್ನು ಆರೋಪಿಗೆ ಓದಿ, ತಿಳಿಸಿ ಹೇಳಿದ ನಂತರ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಳ್ಳಲಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

08ನೇ ಸೆಪ್ಟೆಂಬರ್ ಮಾಹೆ 2025.

**(ಕಾವ್ಯಶ್ರೀ.ಎಂ)**
ಸಿ/ಸಿ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಳ್ಳೇಗಾಲ.(ಪೀಠಾಸೀನ ಹನೂರು)

**OK**